## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ DPRs ಗಳನ್ನು ಪರಾಮರ್ಶಿಸಲು ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಕಾರ್ಯಮಟ್ಟದ ದೂರುಗಳನ್ನು ಪರಿಶೀಲಿಸಲು ಸಾಮಾನ್ಯ ಸಭೆಯ 3 ಸದಸ್ಯರುಗಳನ್ನೊಳಗೊಂಡ ಉಸ್ತುವಾರಿ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ: ಮಾನ್ಯ ಗ್ರಾ.ಅ ಮತ್ತು ಪಂ.ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:31-10-2013ರಂದು ನಡೆದ 10ನೇ ವಾರ್ಷಿಕ ಸಾಮಾನ್ಯ ಸಭೆ ಹಾಗೂ ದಿನಾಂಕ:14-5-2014ರಂದು ನಡೆದ ಕೆಆರ್ಆರ್‌ಡಿಎ ಸಾಮಾನ್ಯ ಸಭೆಯಲ್ಲಿ ನೀಡಿದ ಸೂಚನೆ.

**ಪ್ರಸ್ತಾವನೆ:**

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ನಮ್ಮ ಗ್ರಾಮ ನಮ್ಮ ಯೋಜನೆಯ ಕಾಮಗಾರಿಗಳಿಗೆ DPRsಗಳನ್ನು ತಯಾರಿಸಿ ರಾಜ್ಯ ತಾಂತ್ರಿಕ ಸಂಸ್ಥೆಗೆ (STA) ಕಾಮಗಾರಿಗಳ DPRsಗಳನ್ನು ತಾಂತ್ರಿಕ ಪರಿಶೀಲನೆಗೆ ಸಲ್ಲಿಸಲಾಗುತ್ತದೆ. ರಾಜ್ಯ ತಾಂತ್ರಿಕ ಸಂಸ್ಥೆಯಿಂದ DPRsಗಳನ್ನು ವಿಸ್ತೃತವಾಗಿ ಪರಿಶೀಲಿಸಿದ ನಂತರ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯಿಂದ ತಾಂತ್ರಿಕ ಮಂಜೂರಾತಿ ನೀಡಲಾಗುತ್ತದೆ.

ಮಾನ್ಯ ಗ್ರಾ.ಅ ಮತ್ತು ಪಂ.ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:31-10-2013ರಂದು ನಡೆದ 10ನೇ ವಾರ್ಷಿಕ ಸಾಮಾನ್ಯ ಸಭೆ ಹಾಗೂ ದಿನಾಂಕ:14-5-2014ರಂದು ನಡೆದ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ನೀಡಿದ ಸೂಚನೆಯಂತೆ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ DPRs ಗಳನ್ನು ಪರಾಮರ್ಶಿಸಲು ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಕಾರ್ಯಮಟ್ಟದ ಬಗ್ಗೆ ದೂರುಗಳನ್ನು ಪರಿಶೀಲಿಸಲು ಸಾಮಾನ್ಯ ಸಭೆಯ 3 ಸದಸ್ಯರುಗಳನ್ನೊಳಗೊಂಡ ಉಸ್ತುವಾರಿ ಸಮಿತಿ ರಚಿಸಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ:16/35:ಆರ್‌ಆರ್‌ಸಿ:2014, ಬೆಂಗಳೂರು, ದಿನಾಂಕ:26-6-2014.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯ DPRs ಗಳನ್ನು ಪರಾಮರ್ಶಿಸಲು ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಕಾರ್ಯಮಟ್ಟದ ಬಗ್ಗೆ ದೂರುಗಳನ್ನು ಪರಿಶೀಲಿಸಲು ಸಾಮಾನ್ಯ ಸಭೆಯ 3 ಸದಸ್ಯರುಗಳನ್ನು ಒಳಗೊಂಡ ಉಸ್ತುವಾರಿ ಸಮಿತಿಯನ್ನು ಕೆಳಕಂಡಂತೆ ರಚಿಸಲು ಸರ್ಕಾರವು ಹರ್ಷಿಸುತ್ತದೆ.

| ಕ್ರ. ಸಂ | ಹೆಸರು | ಸಮಿತಿ ಪದನಾಮ |
|---|---|---|
| 1 | ಕ್ಯಾ: ದೊಡ್ಡಿಹಾಳ, ನಿವೃತ್ತ ಮುಖ್ಯ ಇಂಜಿನಿಯರ್ | ಅಧ್ಯಕ್ಷರು |
| 2 | ಶ್ರೀ ಟಿ. ಜನಾರ್ಧನ್, ಅಧ್ಯಕ್ಷರು, ಕೊಪ್ಪಳ ಜಿಲ್ಲಾ ಪಂಚಾಯತ್ | ಸದಸ್ಯರು |
| 3 | ಶ್ರೀ ಅಜಯಕುಮಾರ ಎಚ್. ದಫ್ತರದಾರ | ಸದಸ್ಯರು |
| 4 | ಶ್ರೀ ಚಂದ್ರಹಾಸ, ಕಾರ್ಯಪಾಲಕ ಅಭಿಯಂತರರು | ಸಂಚಾಲಕರು |

ಉಸ್ತುವಾರಿ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರು ಸೂಕ್ತ ಸಭೆಗಳನ್ನು ನಡೆಸಿ 30 ದಿನಗಳಲ್ಲಿ ವರದಿಯನ್ನು ತಯಾರಿಸಿ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಮುಖಾಂತರ ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಗ್ರಾಮೀಣಾಭಿವೃದ್ಧಿ ರವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9
6. ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
7. ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರ್.
9. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು.
10. ಕ್ಯಾ: ದೊಡ್ಡಿಹಾಳ, ನಿವೃತ್ತ ಮುಖ್ಯ ಇಂಜಿನಿಯರ್,
11. ಶ್ರೀ ಅಜಯಕುಮಾರ ಎಚ್. ದಫ್ತರದಾರ C/o ಎಂ.ಕೆ.ಜೋಶಿ ಬಿಲ್ಡಿಂಗ್, HIG-31, ರಧಾಕೃಷ್ಣನಗರ, ಗದಗ (ಮೊಬೈಲ್ ಸಂಖ್ಯೆ-9916844071).
12. ಶ್ರೀ ಚಂದ್ರಹಾಸ, ಕಾರ್ಯಪಾಲಕ ಅಭಿಯಂತರರು.
13. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ.
14. ರಕ್ಷಾ ಕಡತ.
15. ಹೆಚ್ಚುವರಿ ಪ್ರತಿ.